# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕು ಹಾಗೂ ಉಡುಪಿ ಜಿಲ್ಲೆಯ ಉಡುಪಿ ತಾಲ್ಲೂಕಿನಲ್ಲಿ ಮೆಟ್ರಿಕ್ ನಂತರದ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವ ಕುರಿತು.

**ಓದಲಾಗಿದೆ:-**
1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕಇ/ವನಿಶಾ-2/ಸಿಆರ್-49/2021-22, ದಿನಾಂಕ:11.01.2022 ಮತ್ತು 17.01.2022.
2. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 16 ವೆಚ್ಚ-3/2022. ದಿನಾಂಕ:05.02.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಸಂಖ್ಯೆ:(1) ರಲ್ಲಿ ಆಯುಕ್ತರು, ಹಿಂವಕ ಇವರು ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ತಾಲ್ಲೂಕಿನ, ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ 2021-22ನೇ ಸಾಲಿಗೆ ಪ್ರವೇಶ ಕೋರಿ 1016 ಸ್ಥಾನಗಳು ಖಾಲಿ ಇರುತ್ತವೆ. ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿನ ಮೆಟ್ರಿಕ್ ನಂತರದ ಬಾಲಕಿಯರ ಮತ್ತು ಬಾಲಕರ ವಿದ್ಯಾರ್ಥಿ ನಿಲಯಗಳಲ್ಲಿ ಹೊಸದಾಗಿ ಪ್ರವೇಶ ಕೋರಿ ಸ್ವೀಕೃತವಾಗಿರುವ ಅರ್ಜಿಗಳಲ್ಲಿ 1055 ಅರ್ಜಿಗಳು ಬಾಕಿ ಇರುತ್ತವೆ. ಹಾಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಹೆಚ್ಚುವರಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲು ಸ್ಥಳಾವಕಾಶದ ಕೊರತೆ ಇರುತ್ತದೆ ಎಂಬುದಾಗಿ ಅಭಿಪ್ರಾಯಿಸಿರುತ್ತಾರೆ.

ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ತಾಲ್ಲೂಕಿನ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ 325 ಸ್ಥಾನಗಳನ್ನು ಹೆಚ್ಚುವರಿ ಬೇಡಿಕೆ ಇರುವ ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ತಾಲ್ಲೂಕಿಗೆ 125 ಸಂಖ್ಯಾಬಲದ 01 ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ ಮತ್ತು 100 ಸಂಖ್ಯಾಬಲದ 02 ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ವರ್ಗಾಯಿಸಿ ಹಾಗೂ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ ನೀಡಲಾಗುತ್ತಿರುವ 1500 ದರದಲ್ಲಿಯೇ ನಿರ್ವಹಿಸಲು ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ 695 ಸ್ಥಾನಗಳನ್ನು ಹೆಚ್ಚುವರಿ ಬೇಡಿಕೆ ಇರುವ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿಗೆ 100 ಸಂಖ್ಯಾಬಲದ 02 ಮೆಟ್ರಿಕ್ ನಂತರದ ಬಾಲಕರ ಮತ್ತು 100 ಸಂಖ್ಯಾಬಲದ 05 ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ತಾತ್ಕಾಲಿಕವಾಗಿ ವರ್ಗಾಯಿಸಲು ಸೂಕ್ತ ಬಾಡಿಗೆ ಕಟ್ಟಡಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳೊಂದಿಗೆ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಒದಗಿಸಲು ಹಾಗೂ ಉಡುಪಿ ಜಿಲ್ಲೆ ಉಡುಪಿ ತಾಲ್ಲೂಕಿನ ವಿವಿಧ ವಿದ್ಯಾರ್ಥಿ ನಿಲಯಗಳಲ್ಲಿ 190 ಸ್ಥಾನಗಳು ಉಳಿಕೆಯಾಗಿದ್ದು, 150 ಸ್ಥಾನಗಳು ಬೇಡಿಕೆ ಇರುವ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ, ಬನ್ನಂಜೆಗೆ ಅಗತ್ಯ ಸಿಬ್ಬಂದಿಗಳು ಹಾಗೂ ಮೂಲಭೂತ ಸೌಕರ್ಯಗಳೊಂದಿಗೆ ವರ್ಗಾಯಿಸಲು ಹುದ್ದೆಗಳ ವಿವರಗಳೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ:(2) ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಈ ಕಂಡಂತೆ ಅಭಿಪ್ರಾಯಸಿದೆ. "Finance Department agrees for opening a hostel in Mangalore with large strength each for girls and boys and one in Udupi from rented premises. The department is advised to identify the hostels that are running without sufficient strength and rationalise by closing/merging them from the next year".

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 22 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ: 07.02.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ತಲಾ 125 ಸಂಖ್ಯಾಬಲದ 01 ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ಹಾಗೂ 01 ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ ಹಾಗೂ ಉಡುಪಿಯಲ್ಲಿ 125 ಸಂಖ್ಯಾಬಲದ 01 ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯವನ್ನು ಉಚಿತ/ಬಾಡಿಗೆ ಕಟ್ಟಡದಲ್ಲಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

ಷರತ್ತುಗಳು:

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರು ಮೇಲಿನಂತೆ ಅನುಮತಿ ನೀಡಿರುವ ವಿದ್ಯಾರ್ಥಿ ನಿಲಯಗಳಿಗೆ ನಿಯಮಾನುಸಾರ ಅಗತ್ಯವಿರುವ ಹುದ್ದೆಗಳನ್ನು ಶೂನ್ಯ ದಾಖಲಾತಿ ಹೊಂದಿರುವ/ನಿಗಧಿತ ಸಂಖ್ಯಾಬಲ ಹೊಂದಿಲ್ಲದೇ ಇರುವ ವಿದ್ಯಾರ್ಥಿನಿಲಯಗಳಿಂದ ಸ್ಥಳಾಂತರ ಮಾಡಿಕೊಂಡು ಈ ವಿದ್ಯಾರ್ಥಿನಿಲಯಗಳನ್ನು ಈ ಆರ್ಥಿಕ ವರ್ಷದಲ್ಲಿ ನಿರ್ವಹಿಸಲು ನಿಯಮಾನುಸಾರ ಸೂಕ್ತ ಕ್ರಮ ತೆಗೆದುಕೊಳ್ಳುವುದು.

2. ಸಂಬಂಧಿತ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,ಜಿಲ್ಲಾ ಪಂಚಾಯತ್ ರವರಗಳು ಈ ವಿದ್ಯಾರ್ಥಿ ನಿಲಯಗಳ ನಿರ್ವಹಣೆಯ ವೆಚ್ಚವನ್ನು ನಿಯಮಾನುಸಾರ ಜಿಲ್ಲಾವಲಯ ಲೆಕ್ಕಶೀರ್ಷಿಕೆ: 2225-00-103-0-26 ರಡಿ ಒದಗಿಸಲಾಗಿರುವ ಅನುದಾನದಿಂದ ಭರಿಸತಕ್ಕದ್ದು.KTPP Act ಹಾಗೂ Rules ಅನ್ನು ಕಡ್ಡಾಯವಾಗಿ ಪಾಲಿಸತ್ತಕ್ಕದ್ದು.

3. ಈ ಆದೇಶದ ಒಂದು ತಿಂಗಳೊಳಗೆ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಶೂನ್ಯ/ಸಾಕಷ್ಟು ದಾಖಲಾತಿ ಇಲ್ಲದ ವಿದ್ಯಾರ್ಥಿನಿಲಯಗಳನ್ನು ಗುರುತಿಸಿ, ವಿಲೀನಗೊಳಿಸಲು,ಹುದ್ದೆಗಳ್ಳನ್ನು ವರ್ಗಾಯಿಸಲು ಅಥವಾ ಮುಕ್ತಾಯಗೊಳಿಸಲು ಸೂಕ್ತ ಪ್ರಸ್ತಾವೆನಯನ್ನು ಆಯುಕ್ತರು,ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 16 ವೆಚ್ಚ-3/2022 ದಿನಾಂಕ:05.02.2022 ರಲ್ಲಿ ನೀಡಿರುವ ಸಹಮತಿಯೊಂದಿಗೆ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

V. Akkamahadevi 07/02/22
**(ವಿ. ಅಕ್ಕಮಹಾದೇವಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) ಬೆಂಗಳೂರು.